**All India Radio: Bangalore**
**Regional Bulletin In Kannada**
**21.09.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**21.09.2025 / 2.30 p.m.**
**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಅವರಿಂದ ಇಂದು ಸಂಜೆ ೫ ಗಂಟೆಗೆ ದೇಶವನ್ನುದ್ದೇಶಿಸಿ ಭಾಷಣ
2. ಸರಕು ಮತ್ತು ಸೇವಾ ತೆರಿಗೆ - ಜಿಎಸ್‌ಟಿ ಸುಧಾರಣೆ ನಾಳೆ ಜಾರಿ ; ಗ್ರಾಹಕರ ದೂರು ನಿವಾರಣೆಗಾಗಿ ಪೋರ್ಟಲ್ ಸಕ್ರಿಯ
3. ಕರಾವಳಿ ಕಾವಲು ಪಡೆಯಿಂದ ಕಾರವಾರದ ಕಡಲತಡಿಯಲ್ಲಿ ಸ್ವಚ್ಛತಾ ಕಾರ್ಯಕ್ರಮ
4. ಸೈಬರ್ ಭದ್ರತೆ ; ರಾಜ್ಯ ಮುಂಚೂಣಿಯಲ್ಲಿ - ಸೈಬರ್ ಸೆಕ್ಯೂರಿಟಿ ಉತ್ಕೃಷ್ಟತಾ ಕೇಂದ್ರದ ಮುಖ್ಯಸ್ಥ ರಂಜನ್ ಮಿಶ್ರಾ ಸ್ಪಷ್ಟನೆ
5. ಇಂದು ಮಹಾಲಯ ಅಮಾವಾಸ್ಯೆ ; ಶ್ರದ್ಧಾಳುಗಳಿಂದ ಸರ್ವ ಪಿತೃಗಳಿಗೆ ಶ್ರಾದ್ಧ-ಗೌರವ ಸಮರ್ಪಣೆ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಸಂಜೆ ಐದು ಗಂಟೆಗೆ ರಾಷ್ಟ್ರದ ಜನತೆಯನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ.

<><><><>

ಮುಂದಿನ ತಲೆಮಾರಿನ ಸರಕು ಮತ್ತು ಸೇವಾ ತೆರಿಗೆ - ಜಿಎಸ್‌ಟಿ ಸುಧಾರಣೆಗಳು ನಾಳೆ ಜಾರಿಗೆ ಬರಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು, ಈ ವರ್ಷದ ಸ್ವಾತಂತ್ರ್ಯ ದಿನ ಭಾಷಣದಲ್ಲಿ ಈ ಬಗ್ಗೆ ಪ್ರಕಟಿಸಿದ್ದರು. ಜಿಎಸ್‌ಟಿ ನೇರ ತೆರಿಗೆ ವ್ಯವಸ್ಥೆಯನ್ನು ಹಿಂದಿನ ೪ ಹಂತದ ವಿನ್ಯಾಸಗಳಿಂದ ಎರಡು ಹಂತಗಳಿಗೆ ಸರಳೀಕರಿಸಲಾಗಿದೆ.

<><><><>

ನಾಳೆಯಿಂದ ಜಾರಿಗೆ ಬರುವ ಪರಿಷ್ಕೃತ ಜಿಎಸ್‌ಟಿ ದರಗಳು ಮತ್ತು ವಿನಾಯಿತಿಗಳ ಅನುಷ್ಠಾನದ ನಂತರ ನಿರೀಕ್ಷಿತ ಗ್ರಾಹಕರ ಪ್ರಶ್ನೆಗಳು ಮತ್ತು ದೂರುಗಳನ್ನು ಪರಿಹರಿಸಲು ಸಮಗ್ರ

ಕುಂದುಕೊರತೆ ಪರಿಹಾರ ಕಾರ್ಯವಿಧಾನ-ಇನ್ ಗ್ರಾಮ್ ಪೋರ್ಟಲ್ ಸಕ್ರಿಯಗೊಳಿಸಲಾಗಿದೆ ಎಂದು ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಗ್ರಾಹಕರು ಈಗ ಟೋಲ್-ಫ್ರೀ ಸಂಖ್ಯೆ ೧-೯-೧-೫ ಮೂಲಕ ಅಥವಾ ಐಎನ್‌ಜಿಆರ್‌ಎಎಂ ಪೋರ್ಟಲ್ ಮೂಲಕ ಹದಿನೇಳು ಭಾಷೆಗಳಲ್ಲಿ ತಮ್ಮ ದೂರುಗಳನ್ನು ಸಲ್ಲಿಸಬಹುದು ಎಂದು ಸಚಿವಾಲಯ ತಿಳಿಸಿದೆ.

<><><><>

ಭಾರತೀಯ ಕೋಸ್ಟ್ ಗಾರ್ಡ್ ವತಿಯಿಂದ ಅಂತಾರಾಷ್ಟ್ರೀಯ ಕಡಲತೀರ ಸ್ವಚ್ಛತಾ ದಿನದ ಅಂಗವಾಗಿ ಇಂದು ಕಾರವಾರದ ರವೀಂದ್ರನಾಥ್ ಠಾಗೂರ್ ಬೀಚ್‌ನಲ್ಲಿ ಬೀಚ್ ಸ್ವಚ್ಛತಾ ಕಾರ್ಯಕ್ರಮ ನಡೆಯಿತು. ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಜಗತ್ತಿನಲ್ಲಿ ಜೀವಿಗಳ ಉದಯ ಸಮುದ್ರದಿಂದಲೇ ಆಗಿದೆ. ಆದರೆ ಪ್ರಸ್ತುತ ಮಾನವನಿಂದಲೇ ಸಮುದ್ರವು ಅತೀ ಹೆಚ್ಚು ಮಲಿನಗೊಳ್ಳುತ್ತಿದೆ ಸಮುದ್ರದಲ್ಲಿನ ಪ್ಲಾಸ್ಟಿಕ್ ತ್ಯಾಜ್ಯವನ್ನು ಮೀನು ಮತ್ತಿತರ ಕಡಲ ಜೀವಿಗಳು ಸೇವಿಸುವುದರಿಂದ, ಆಹಾರಕ್ಕಾಗಿ ಇವುಗಳನ್ನು ಉಪಯೋಗಿಸುವ ಮಾನವನ ಆರೋಗ್ಯದ ಮೇಲೆಯೂ ದುಷ್ಪರಿಣಾಮಗಳು ಉಂಟಾಗುತ್ತಿದೆ. ಸಮುದ್ರ ಮತ್ತು ಸಮುದ್ರ ತೀರವನ್ನು ಸ್ವಚ್ಛವಾಗಿಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಕೋಸ್ಟ್ ಗಾರ್ಡ್ ಕಮಾಂಡೆಂಟ್ ಕಿರಣ್ ಕುಮಾರ್ ಸಿನ್ಹಾ ಮಾತನಾಡಿ, ಪ್ಲಾಸ್ಟಿಕ್ ವಸ್ತುಗಳ ಬಳಕೆಯನ್ನು ನಿಯಂತ್ರಿಸಿ ಅದಕ್ಕೆ ಪರ್ಯಾಯವಾಗಿರುವ ಇತರೇ ಪರಿಸರ ಸ್ನೇಹಿ ವಸ್ತುಗಳನ್ನು ಬಳಸಬೇಕು ಎಂದರು. ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಕೋಸ್ಟ್ ಗಾರ್ಡ್ ಸಿಬ್ಬಂದಿಗಳು, ಮೀನುಗಾರರು ಹಾಗೂ ಸಾರ್ವಜನಿಕರು ಬೀಚ್ ಸ್ವಚ್ಚತಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

<><><><>

ಸೈಬರ್ ಭದ್ರತೆ ಕ್ಷೇತ್ರದಲ್ಲಿ, ಕರ್ನಾಟಕ ಮುಂಚೂಣಿಯಲ್ಲಿದೆ ಎಂದು ರಾಜ್ಯ ಸೈಬರ್ ಸೆಕ್ಯೂರಿಟಿ ಉತ್ಕೃಷ್ಟತಾ ಕೇಂದ್ರದ ಮುಖ್ಯಸ್ಥ ರಂಜನ್ ಮಿಶ್ರಾ ತಿಳಿಸಿದ್ದಾರೆ. ಧಾರವಾಡದಲ್ಲಿ ಆಯೋಜಿಸಲಾಗಿದ್ದ ಸ್ಮಾರ್ಟ್ ಸೆಕ್ಯೂರಿಟಿ ಫಾರ್ ಸ್ಮಾರ್ಟ್ ಪೀಪಲ್ ಹ್ಯಾಕಥಾನ್ ಉದ್ಘಾಟಿಸಿ ಮಾತನಾಡಿದ ಅವರು, ಉತ್ತರ ಕರ್ನಾಟಕ ಭಾಗದಲ್ಲಿ, ನವೋದ್ಯಮಗಳು ಅನೇಕ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸಲಿವೆ ಎಂದರು.

<><><><>

ಪ್ರಧಾನಿ ನರೇಂದ್ರ ಮೋದಿ ಬಾಲ್ಯದ ದಿನಗಳ ಚರಿತ್ರೆ ಆಧರಿತ 'ಚಲೋ ಜೀತೆ ಹೈ' ಕಿರುಚಿತ್ರವನ್ನು ಧಾರವಾಡ ಐನಾಕ್ಸ್‌ನ ಸ್ಮಾರ್ಟ್ ಸಿಟಿ ಮಾಲ್‌ನಲ್ಲಿ ಪ್ರದರ್ಶಿಸಲಾಯಿತು. ಕಿರುಚಿತ್ರದ ಪ್ರದರ್ಶನದ ಮೂರನೆ ದಿನವೂ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಮಾತನಾಡಿದ ಪ್ರೇಕ್ಷಕರಾದ ರಾಜೇಶ್ವರಿ ಅಳಗವಾಡಿ ಈ ಸ್ಫೂರ್ತಿದಾಯಕ ಸಿನಿಮಾವನ್ನು ಹೆಚ್ಚಿನ ಸಂಖ್ಯೆಯಲ್ಲಿ ಜನರು ವೀಕ್ಷಿಸುವಂತೆ ತಿಳಿಸಿದ್ದಾರೆ.

**ಧ್ವನಿ : ರಾಜೇಶ್ವರಿ ಅಳಗವಾಡಿ (೨೫ ಸೆಕೆಂಡ್‌ಗಳು)**

<><><><>

ಇಂದು ಮಹಾಲಯ ಅಮಾವಾಸ್ಯೆ. ಪಿತೃಪಕ್ಷ ಕೊನೆಗೊಳ್ಳುವ ಈ ದಿನದಂದು, ಸರ್ವ ಪಿತೃಗಳಿಗೆ ಶ್ರಾದ್ಧ ಕಾರ್ಯ ಮಾಡುವ ಸಂಪ್ರದಾಯ ಆಚರಣೆಯಲ್ಲಿದೆ. ಉತ್ತರಕನ್ನಡ ಜಿಲ್ಲೆಯ ಗೋಕರ್ಣದ ಕೋಟಿ ತೀರ್ಥದಲ್ಲಿ ಬೇರೆ ಬೇರೆ ಜಿಲ್ಲೆ ಹಾಗೂ ಹೊರ ರಾಜ್ಯಗಳಿಂದ ಅಸಂಖ್ಯಾತ ಶ್ರದ್ಧಾಳುಗಳು ಆಗಮಿಸಿ ಪಿತೃಗಳ ಸಂತೃಪ್ತಿಗಾಗಿ ಅರ್ಚಕರ ಮುಖೇನ ಪಿಂಡ ಪ್ರದಾನ ಹಾಗೂ ಗೋ ಮತ್ತು ಕಾಗೆಗಳಿಗೆ ಆಹಾರ ಸಮರ್ಪಣೆ ಮಾಡಿದರು. ಮಂಡ್ಯ ಜಿಲ್ಲೆಯ ಹಲವೆಡೆ ಕಾವೇರಿ ನದಿ ತೀರದಲ್ಲಿ ಶ್ರದ್ಧಾಳುಗಳು ಪೂರ್ವಿಕರಿಗೆ ಪಿಂಡ ಪ್ರದಾನ ಮಾಡಿದರು. ಮಂಡ್ಯ ಜಿಲ್ಲೆಯ ಪಶ್ಚಿಮವಾಹಿನಿ, ಗೋಸಾಯಿ ಘಾಟ್, ಸಂಗಮ, ಮುತ್ತತ್ತಿ ಕಾವೇರಿ ನದಿ ದಡದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಶ್ರದ್ಧಾಳುಗಳು ಕುಟುಂಬದ ಹಿರಿಯರಿಗೆ ಪೂಜಾ ಕೈಂಕರ್ಯ ನೆರವೇರಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಮಹಾಲಯ ಅಮಾವಾಸ್ಯೆ ಆಚರಣೆ ಮಾಡಿ, ಪಿತೃಗಳಿಗೆ ಎಡೆ ಇಟ್ಟು ಸ್ಮರಣೆ ಮಾಡಲಾಗುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಶ್ರದ್ಧಾಕೇಂದ್ರಗಳಲ್ಲಿ ಮಹಾಲಯ ಅಮಾವಾಸ್ಯೆಯ ಅಂಗವಾಗಿ ವಿಶೇಷ ಪೂಜಾ ಕಾರ್ಯಗಳು ನಡೆಯುತ್ತಿವೆ.

<><><><>

ಎಣ್ಣೆ ಕಾಳುಗಳ ಉತ್ಪಾದನೆಯಲ್ಲಿ ಭಾರತ ಸ್ವಾವಲಂಬನೆ ಸಾಧಿಸಲು ರೈತರ ಸಹಕಾರ ಅಗತ್ಯ ಎಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಕೃಷಿ ವಿಜ್ಞಾನಿ ಮಲ್ಲಿಕಾರ್ಜುನ ಹೇಳಿದರು. ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲೂಕಿನ ನೀತಿಗೆರೆ ಗ್ರಾಮದಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಹಾಗೂ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ "ಅಡಿಯಲ್ಲಿ ಏರ್ಪಡಿಸಲಾಗಿದ್ದ ಸೋಯಾಬೀನ್ ಬೆಳೆಯಲ್ಲಿ ಮುಂಚೂಣಿ ಪ್ರಾತ್ಯಕ್ಷಿಕೆಯ ಕ್ಷೇತ್ರೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು.

ಅಡುಗೆ ಎಣ್ಣೆ ಅಮದಿನ ಮೇಲೆ ವಿದೇಶಿ ಅವಲಂಬನೆ ಕಡಿಮೆ ಮಾಡುವುದು ಇಂದಿನ ಅಗತ್ಯವಾಗಿದ್ದು, ರೈತರು ಅಕ್ಕಡಿ ಬೆಳೆಯಾಗಿ ಸೋಯಾಬಿನ್, ಸೂರ್ಯಕಾಂತಿ ಸೇರಿದಂತೆ ಹಲವು ಬೆಳೆಗಳನ್ನು ಬೆಳೆಯಬಹುದು ಎಂದು ಸಲಹೆ ನೀಡಿದರು. ಪ್ರಗತಿಪರ ಕೃಷಿಕ  ರುದ್ರೇಶ್ ಮಾತನಾಡಿ ಸೋಯಾಬೀನ್ ಬೆಳೆಯನ್ನು ಒಂದು ಎಕರೆ ಪ್ರದೇಶದಲ್ಲಿ ಬೆಳೆದಿದ್ದು, ೧೨ ಸಾವಿರ ರೂಪಾಯಿ ವೆಚ್ಚವಾಗಿದೆ. ೮ ರಿಂದ ೧೦ ಕ್ವಿಂಟಲ್ ಇಳುವರಿ ಬಂದಿದ್ದು ಪ್ರತಿ ಕ್ವಿಂಟಾಲಿಗೆ ನಾಲ್ಕರಿಂದ ಐದು ಸಾವಿರ ರೂಪಾಯಿ ಸಿಕ್ಕರೆ, ಎಕರೆಗೆ ೨೦ ಸಾವಿರ ಲಾಭಗಳಿಸಬಹುದು ಎಂದರು.

<><><><>

ಯಾದಗಿರಿ ಜಿಲ್ಲೆಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ೨ ಲಕ್ಷ ೪೦ ಸಾವಿರ ಕುಟುಂಬಗಳನ್ನು ಗುರುತಿಸಲಾಗಿದೆ. ೨ ಸಾವಿರದ ೪೪೧ ಶಿಕ್ಷಕರನ್ನು ಗಣತಿದಾರರನ್ನಾಗಿ ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ರಾಜ್ಯ ಹಿಂದುಳಿದ ಆಯೋಗದ ವತಿಯಿಂದ ಸಮೀಕ್ಷೆ ಕುರಿತು ಸಭೆಯಲ್ಲಿ ಮಾತನಾಡಿದ ಅವರು, ಜೆಸ್ಕಾಂನ ವಿದ್ಯುತ್ ಮೀಟರ್ ರೀಡರ್‌ಗಳು ಮನೆ ಮನೆಗೆ ಜಿಯೊ ಟ್ಯಾಗಿಂಗ್ ಮಾಡುವ ಕಾರ್ಯದಲ್ಲಿ ನಿರತವಾಗಿದ್ದಾರೆ. ಸ್ಟಿಕ್ಕರ್ ಅಂಟಿಸುವ ಕಾರ್ಯ ಅಂತಿಮ ಹಂತದಲ್ಲಿದೆ ಎಂದು ಜೆಸ್ಕಾಂ ಅಧಿಕಾರಿಗಳು ಮಾಹಿತಿ ನೀಡಿದರು. ತಹಶೀಲ್ದಾರ್‌ಗಳು ಬ್ಲಾಕ್‌ವಾರು ಗಣತಿದಾರರನ್ನು ನೇಮಿಸಿಕೊಳ್ಳುವಾಗ ಪ್ರತಿ ೧೫೦ ಮನೆಗಳಿಗೆ ಒಬ್ಬರಂತೆ ಗಣತಿದಾರರನ್ನು ನೇಮಿಸಬೇಕು. ಮಹಿಳಾ ಶಿಕ್ಷಕರಿಗೆ ಪ್ರಥಮ ಆದ್ಯತೆ ನೀಡಬೇಕು ಎಂದು ತಹಶೀಲ್ದಾರ್‌ಗಳಿಗೆ ಸೂಚಿಸಿದರು. ರಾಜ್ಯ ಮಟ್ಟದ ಮಾಸ್ಟರ್ ಟ್ರೇನರ್‌ಗಳಿಂದ ಜಿಲ್ಲಾ ಮಟ್ಟದ ೬೦ ಟ್ರೇನರ್‌ಗಳಿಗೆ ತರಬೇತಿ ಕೊಡಲಾಗಿದೆ. ಈಗಾಗಲೇ ಮೊದಲ ಹಂತದ ತರಬೇತಿಯೂ ಮುಗಿದಿದೆ. ೨ನೇ ಹಂತದ ತರಬೇತಿ ಕೊಡಲಾಗುವುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಮಾಹಿತಿ ನೀಡಿದರು.

<><><><>

ಕೋಲಾರ ತಾಲೂಕಿನ ನರಸಾಪುರ ಹೋಬಳಿಯ ಬೆಳ್ಳೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಜೋಡಿ ಕೃಷ್ಣಾಪುರ ಗ್ರಾಮದಲ್ಲಿ ಇಂದು ಸ್ವಚ್ಛೋತ್ಸವ ನಡೆಯಿತು. ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಂಪರಾಜ್ ಸ್ವಚ್ಛೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ

ಮಾತನಾಡಿ, ಕಾರ್ಮಿಕರು, ನಾಗರೀಕರು, ಸ್ವಚ್ಛತೆಯ ರೂವಾರಿಗಳಾಗಿ ಸುತ್ತ ಮುತ್ತಲಿನ ಜನರಲ್ಲಿ ಪರಿಸರ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸಬೇಕು ಎಂದರು. ನಾವು ಬಳಸುವ ಪ್ಲಾಸ್ಟಿಕ್‌ನಿಂದ ಯಾವ ರೀತಿ ಹಾನಿಯಾಗುತ್ತಿದೆ ಎಂದು ಜನಸಾಮಾನ್ಯರಿಗೆ ಅರಿವು ಇಲ್ಲವಾಗಿದೆ ಈ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕೆಲಸವನ್ನು ಮಾಡಬೇಕು ಎಂದರು. ಗ್ರಾಮ ಪಂಚಾಯತ್ ಅಧ್ಯಕ್ಷೆ ಮಮತಾ ಮಂಜುನಾಥ್ ಮಾತನಾಡಿ, ಒಬ್ಬ ವ್ಯಕ್ತಿಯ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಪಾಡಲು ಸ್ವಚ್ಛತೆ ಅತ್ಯಗತ್ಯ ನೈರ್ಮಲ್ಯ ಅಭ್ಯಾಸಗಳನ್ನು ಅನುಸರಿಸುವ ಮೂಲಕ ಸ್ವಚ್ಛ ಭಾರತದ ಉದ್ದೇಶವನ್ನು ಸಾಧಿಸಲು ನೆರವಾಗಬೇಕು ಎಂದು ಕರೆ ನೀಡಿದರು.

<><><><>

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ಸಮೀಕ್ಷೆಯನ್ನು ನಡೆಸಲಾಗುತ್ತಿದ್ದು, ಸಾರ್ವಜನಿಕರು ಗಣತಿದಾರರಿಗೆ ಅಗತ್ಯ ಮಾಹಿತಿ ನೀಡಿ ಸಹಕರಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಕೋರಿದ್ದಾರೆ. ಈ ಸಮೀಕ್ಷೆಯು ನಾಳೆಯಿಂದ ಅಕ್ಟೊಬರ್ ೭ ರವರೆಗೆ ನಡೆಯಲಿದ್ದು, ಸಮೀಕ್ಷೆ ಸಂದರ್ಭದಲ್ಲಿ ಗಣತಿದಾರರು ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>